ಕರ್ನಾಟಕ ಸರ್ಕಾರ

ಜನವರಿ 27, 2017

# ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಗೆ 102 ನೂತನ ವಾಹನಗಳ ಲೋಕಾರ್ಪಣೆ, ದಕ್ಷತೆ ಹೆಚ್ಚಿಸಲು ಪೊಲೀಸರಿಗೆ ಸಕಲ ಸೌಲಭ್ಯ : ಮುಖ್ಯಮಂತ್ರಿ ಭರವಸೆ



**ಬೆಂಗಳೂರು, ಜನವರಿ 27:**

ಕಾನೂನು ಮತ್ತು ಸುವ್ಯವಸ್ಥೆ ಕಾಯ್ದುಕೊಳ್ಳಲು ಅನುವಾಗುವಂತೆ ಕರ್ನಾಟಕ ರಾಜ್ಯ ಪೊಲೀಸ್ ಮೀಸಲು ಪಡೆಗೆ 102 ನೂತನ ವಾಹನಗಳನ್ನು ಲೋಕಾರ್ಪಣೆ ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪೊಲೀಸ್ ಇಲಾಖೆಯಲ್ಲಿ ಮತ್ತಷ್ಟು ದಕ್ಷತೆಯ ಹೆಚ್ಚಿಸಲು ಪೊಲೀಸರಿಗೆ ಸಕಲ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದು ಇಲ್ಲಿ ಇಂದು ಭರವಸೆ ನೀಡಿದರು.

ವಿಧಾನಸೌಧದ ವೈಭವೋಪೇತ ಮೆಟ್ಟಿಲುಗಳ ಮುಂಭಾಗದಲ್ಲಿ ನಡೆದ ಸಮಾರಂಭದಲ್ಲಿ ಆಧುನಿಕ ಸೌಲಭ್ಯಗಳನ್ನು ಹೊಂದಿದ 102 ನೂತನ ವಾಹನಗಳನ್ನು ಕರ್ನಾಟಕ ರಾಜ್ಯ ಪೊಲೀಸ್ ಮೀಸಲು ಪಡೆಗೆ ಹಸಿರು ನಿಶಾನೆ ತೋರುವ ಮೂಲಕ ಲೋಕಾರ್ಪಣೆ ಮಾಡಿ ಅವರು ಮಾತನಾಡುತ್ತಿದ್ದರು.

ರಾಜ್ಯದಲ್ಲಿ ಕರ್ನಾಟಕ ರಾಜ್ಯ ಪೊಲೀಸ್ ಮೀಸಲು ಪಡೆಯ ಹನ್ನೊಂದು ಬೆಟಾಲಿಯನ್‌ಗಳು ಮತ್ತು ಇಂಡಿಯಾ ರಿಸರ್ವ್ ಬೆಟಾಲಿಯನ್ ಪೊಲೀಸ್ ಪಡೆಯ ಎರಡು ಬೆಟಾಲಿಯನ್‌ಗಳು ಕಾರ್ಯ ನಿರ್ವಹಿಸುತ್ತಿವೆ. ಸದಾ ಕಾಲ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಯ್ದುಕೊಳ್ಳಲು ಕಾರ್ಯ ನಿರ್ವಹಿಸುವ ಪೊಲೀಸ್‌ರ ತ್ವರಿತ ಹಾಗೂ ಉತ್ತಮ ಕಾರ್ಯ ನಿರ್ವಹಣೆಗಾಗಿ 22.63 ಕೋಟಿ ರೂ. ವೆಚ್ಚದಲ್ಲಿ ಎಲ್ಲಾ ಆಧುನಿಕ ಸೌಕರ್ಯ ಹೊಂದಿದ 102 ನೂತನ ವಾಹನಗಳನ್ನು ಒದಗಿಸಲಾಗಿದೆ. ಮುಂದಿನ ದಿನಗಳಲ್ಲಿ ರಾಜ್ಯದಲ್ಲಿಯೂ ಮಹಿಳಾ ಪೊಲೀಸರಿಗೆ ರಾಜಸ್ಥಾನದಲ್ಲಿ ಇರುವಂತೆ ಶೌಚಾಲಯ ಸೌಲಭ್ಯವಿರುವ ವಾಹನಗಳನ್ನು ಒದಗಿಸಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು.

ಪೊಲೀಸರಿಗೆ ಉತ್ತಮ ಸೇವೆ ಸಲ್ಲಿಸಲು ರಾಜ್ಯ ಸರ್ಕಾರವು ಹೆಚ್ಚಿನ ಸೌಲಭ್ಯಗಳನ್ನು ಒದಗಿಸುವತ್ತ ಗಮನಹರಿಸಿದೆ. ಪೊಲೀಸ್ ಪೇದೆಯಿಂದ ಪೊಲೀಸ್ ಉಪಾಧೀಕ್ಷರ ಹುದ್ದೆಯವರೆಗಿನ ಅಧಿಕಾರಿ ಸಿಬ್ಬಂದಿಗೆ ಒಂದು ಸಾವಿರ ರೂ ಗಳಿಂದ ಎರಡು ಸಾವಿರ ರೂ ವರೆಗೆ ಹೆಚ್ಚುವರಿ ಶ್ರಮಿಕ ಭತ್ಯೆ ನೀಡುತ್ತಿದೆ. ಹತ್ತು ವರ್ಷ ಸೇವೆ ಪೂರೈಸಿದ ಎಲ್ಲಾ ವರ್ಗದ ಸುಮಾರು **11,000** ಪೊಲೀಸ್ ಸಿಬ್ಬಂದಿಗೆ ಮುಂಬಡ್ತಿ ನೀಡುವ ಕುರಿತಂತೆ ಈಗಾಗಲೇ ಅಗತ್ಯ ಸರ್ಕಾರಿ ಆದೇಶ ಹೊರಡಿಸಲಾಗಿದೆ ಎಂದು ಸಿದ್ದರಾಮಯ್ಯ ಅವರು ಹೇಳಿದರು.

ಸಾರ್ವಜನಿಕರು ನಿರ್ಭಯವಾಗಿ ಬದುಕುವ ವಾತಾವರಣವನ್ನು ಪೊಲೀಸರು ಸ್ಥಾಪಿಸಬೇಕು. ಸಮಾಜದಲ್ಲಿ ಕಾನೂನು ಕೈಗೆ ತೆಗೆದುಕೊಂಡು ನಾಗರೀಕರಿಗೆ ತೊಂದರೆ ಕೊಡುವವರ ವಿರುದ್ಧ ಕಠಿಣಕ್ರಮ ಕೈಗೊಳ್ಳಲು ಪ್ರಾಮಾಣಿಕ ಪ್ರಯತ್ನ ಆಗಬೇಕಿದೆ. ಕಾನೂನಿನ ಬಗ್ಗೆ ಗೌರವ ಹಾಗೂ ಕಾನೂನು ಉಲ್ಲಂಘಿಸಬಾರದು ಎಂಬ ಕಾಳಜಿ ಎಲ್ಲರಲ್ಲೂ ಇದ್ದಲ್ಲಿ ಸಮಾಜದಲ್ಲಿ ಅಪರಾಧಗಳ ನಿಯಂತ್ರಣ ಸಾಧ್ಯ ಎಂದು ಮುಖ್ಯಮಂತ್ರಿಗಳು ಅಭಿಪ್ರಾಯಪಟ್ಟರು.

ಗೃಹ ಸಚಿವ ಡಾ ಜಿ. ಪರಮೇಶ್ವರ್, ಗೃಹ ಸಚಿವರ ಭದ್ರತಾ ಸಲಹೆಗಾರ ಕೆಂಪಯ್ಯ, ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಹಾಗೂ ಮಹಾ ನಿರೀಕ್ಷಕ ಓಂ ಪ್ರಕಾಶ್, ಪೊಲೀಸ್ ಮಹಾ ನಿರ್ದೇಶಕರಾದ ಹೆಚ್. ಸಿ. ಕಿಶೋರ್ ಚಂದ್ರ, ಅಪರ ಪೊಲೀಸ್ ಮಹಾ ನಿರ್ದೇಶಕ ಭಾಸ್ಕರ್‌ರಾವ್, ಪೊಲೀಸ್ ಮಹಾ ನಿರೀಕ್ಷಕ ಚರಣ್ ರೆಡ್ಡಿ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳು ಈ ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

**********

ಟಿ ಸಿ ಎಂ ಬಿ